**ಸಾಕ್ಷಿಯನ್ನು ದಿನಾಂಕಃ 23-02-2024 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಕೆ.ಕೆ.ಪಿ.ವಕೀಲರವರಿಂದಃ**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತದೆ. ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸದರಿ ಸಾಕ್ಷಿಯನ್ನು ಪಿ ಡಬ್ಲೂ 3 ಎಂದು ಪರಿಗಣಿಸಲಾಗಿದೆ.**

ನಾನು ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ದಿಃ 08-12-2014 ರ ಕ್ರಯಕರಾರುಪತ್ರದಲ್ಲಿ ಇರುವ ಸಹಿ ನನ್ನ ಮಾವನ ಸಹಿ ಇರುತ್ತದೆ. ಸದರಿ ದಾಖಲೆಯನ್ನು ನಮ್ಮ ಮಾವ ಬರೆದು, ಸಹಿ ಮಾಡಿರುತ್ತಾರೆ. ಆದ್ದರಿಂದ ಸದರಿ ದಾಖಲೆಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀಸವಾಲುಃ ಪ್ರತಿವಾದಿ ಮತ್ತು ಪ್ರತಿವಾದಿಯರ ಪರ ವಕೀಲರನ್ನು ಕೂಗಿಸಲಾಗಿ, ಸದರಿಯವರು ಗೈರುಹಾಜರಿರುವುದರಿಂದ ಸದರಿಯವರ ಪರ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆಃ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸರಿಯಿದೆ.**

**ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ಹರಪನಹಳ್ಳಿ**